ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 254 ಗ್ರಾಪಂಕಾ 2016(ಭಾಗ-3)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 09.09.2016

## ಅಧಿಕೃತ ಜ್ಞಾಪನ

**ವಿಷಯ: ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಅಂತರ್ ಜಿಲ್ಲಾ ವರ್ಗಾವಣೆಯ ಬಗ್ಗೆ.**

****

ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 16–ಎ ರನ್ವಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಅವರ ಕೋರಿಕೆಯ ಮೇರೆಗೆ ಅವರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯಿಂದ **ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ** ಅಂತರ್ ಜಿಲ್ಲಾ ವರ್ಗಾವಣೆ ಮಾಡಿ, ಕೆಳಕಂಡ ಎಲ್ಲಾ ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಡಿಸಿ ಆದೇಶಿಸಿದೆ.

| ಕ್ರ.ಸಂ. | ನೌಕರರ ಹೆಸರು | ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸ್ಥಳ ಮತ್ತು ಜಿಲ್ಲೆ | ವರ್ಗಾಯಿಸಿರುವ ಜಿಲ್ಲೆ |
|---|---|---|---|
| 1 | ಶ್ರೀಮತಿ ಎಂ.ಉಷಾ | ಕನಕುಪ್ಪೆ ಗ್ರಾಮ ಪಂಚಾಯತಿ, ತುಮಕೂರು ತಾಲ್ಲೂಕು ಮತ್ತು ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 2 | ಶ್ರೀ ಪಿ.ಎನ್. ರಾಮಸ್ವಾಮಿ | ಗುಲಸಂದ ಗ್ರಾಮ ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 3 | ಶ್ರೀಮತಿ ಸುನಿತಾ ಸಿ. | ಹೊನ್ನಳಗೆರೆ ಗ್ರಾಮ ಪಂಚಾಯತಿ, ಮಂಡ್ಯ ತಾಲ್ಲೂಕು ಮತ್ತು ಜಿಲ್ಲೆ. | ಬೆಂಗಳೂರು ಗ್ರಾಮಾಂತರ ಜಿಲ್ಲೆ. |

**(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಂದ ಅನುಮೋದಿತ)**

**ಷರತ್ತುಗಳು:**

1. ಮೊದಲು ನೌಕರರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯಲ್ಲಿನ ತಮ್ಮ ಜೇಷ್ಠತೆಯನ್ನು ಬಿಟ್ಟು ಕೊಡಲು ಹಾಗೂ ವರ್ಗಾವಣೆಗೊಂಡ ಜಿಲ್ಲೆಯಲ್ಲಿನ ತನ್ನ ವೃಂದದ ನೌಕರರ ಜೇಷ್ಠತಾ ಪಟ್ಟಿಯಲ್ಲಿ ಕೊನೆಯವನಾಗಿ ಸೇರ್ಪಡೆಗೊಳ್ಳಲು ಸಿದ್ದರಿರುವುದಾಗಿ ಲಿಖಿತವಾಗಿ ಒಪ್ಪಿಗೆ ನೀಡತಕ್ಕದ್ದು. ಯಾವ ಜಿಲ್ಲೆಗೆ ವರ್ಗಾವಣೆ ಆಗಿ ಹೋಗಬೇಕು ಆ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ನೇರ ನೇಮಕಾತಿ ಕೋಟಾದಡಿ ಹುದ್ದೆಯು ಖಾಲಿ ಇರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು. ಇದನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಬಿಡುಗಡೆ ಮಾಡಬೇಕಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಲಿಖಿತವಾಗಿ ಖಚಿತಪಡಿಸಿಕೊಳ್ಳತಕ್ಕದ್ದು.
2. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ ಸದರಿ ನೌಕರರ ಪರಿವೀಕ್ಷಣಾವಧಿ ತೃಪ್ತಿಕರವಾಗಿ ಘೋಷಣೆಯಾಗಿರಬೇಕು.
3. ನೌಕರರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಇರಬಾರದು.
4. ಇವರ ಜೇಷ್ಠತೆಯು ವರ್ಗಾವಣೆ ಹೊಂದಿದ ಜಿಲ್ಲೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ ನಿಯಮಗಳು) ನಿಯಮಗಳು, 1957 ರ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
5. ಈ ನೌಕರರು ಯಾವುದೇ ವರ್ಗಾವಣೆ ಭತ್ಯೆ, ಪ್ರಯಾಣ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

6. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಹುದ್ದೆ ಲಭ್ಯವಿದ್ದಲ್ಲಿ ಮಾತ್ರ ಪರಿಗಣಿಸತಕ್ಕದ್ದು.
7. ಯಾವುದೇ ಕಾರಣಕ್ಕೂ ಬಡ್ತಿ ಕೋಟಾದ ಹುದ್ದೆಯ ಎದುರು ಪರಿಗಣಿಸತಕ್ಕದ್ದಲ್ಲ.
8. ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 16 ಎ ರನ್ವಯ ಒಂದಕ್ಕಿಂತ ಹೆಚ್ಚು ಸಲ ಒಂದು ಜಿಲ್ಲಾ ವೃಂದದಿಂದ ಮತ್ತೊಂದು ಜಿಲ್ಲಾ ವೃಂದಕ್ಕೆ ವರ್ಗಾವಣೆ ಮಾಡಲು ಅವಕಾಶವಿರುವುದಿಲ್ಲ. ಈಗಾಗಲೇ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಒಂದು ಬಾರಿ ಅಂತರ್ ಜಿಲ್ಲೆ ವರ್ಗಾವಣೆ ಆಗಿದ್ದರೆ ಮತ್ತೊಮ್ಮೆ ಪರಿಗಣಿಸಲು ಅವಕಾಶವಿರುವುದಿಲ್ಲ.

ಮೇಲಿನ ನಿಬಂಧನೆಗಳು ಪೂರೈಸುವ ಬಗ್ಗೆ ಖಚಿತಪಡಿಸಿಕೊಂಡ ನಂತರ ಮಾತ್ರ ಸದರಿ ನೌಕರರನ್ನು ಅವರ ಹುದ್ದೆಯಿಂದ ಬಿಡುಗಡೆ ಮಾಡತಕ್ಕದ್ದು.

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಪ್ರತಿ:</u>

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ತುಮಕೂರು, ಹಾಸನ ಮತ್ತು ಮಂಡ್ಯ ಜಿಲ್ಲಾ ಪಂಚಾಯತಿಗಳು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ನಿರ್ದೇಶಕರು (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಸಂಬಂಧಿಸಿದ ನೌಕರರಿಗೆ.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.